## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅಧ್ಯಕ್ಷರು, ಕುಂದಾಪುರ ತಾಲ್ಲೂಕು ಪಂಚಾಯಿತಿ ಇವರ ಉಪಯೋಗಕ್ಕಾಗಿ ಹೊಸ ವಾಹನ ಖರೀದಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಕುಂದಾಪುರ ಇವರ ಪತ್ರ ಸಂಖ್ಯೆ: ತಾಪಂಕು:ವಾಹನ:ಸಿಆರ್: :2014-15 ದಿನಾಂಕ 17.03.2015.

:-:

**ಪ್ರಸ್ತಾವನೆ:**

ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಕುಂದಾಪುರ ಇವರು ಮೇಲೆ ಓದಲಾದ ದಿನಾಂಕ 17.03.2015 ರ ಪತ್ರದಲ್ಲಿ ಅಧ್ಯಕ್ಷರು, ತಾಲ್ಲೂಕು ಪಂಚಾಯಿತಿ, ಕುಂದಾಪುರ ಇವರ ಉಪಯೋಗಕ್ಕಾಗಿ, ಬಳಸುತ್ತಿರುವ ವಾಹನ ಸಂಖ್ಯೆ: ಕೆಎ ಕೆಎ 19 ಜಿ 157 ಟೆಂಪೋ ಟ್ರಾಕ್ಸ್ ಅನುಪಯುಕ್ತವಾಗಿರುವ ಕಾರಣ. ಹೊಸ ವಾಹನ ಮಹೇಂದ್ರ & ಮಹೇಂದ್ರ ಕಾರನ್ನು ಖರೀದಿಸಲು ಹಾಗೂ ಸದರಿ ವೆಚ್ಚವನ್ನು ತಾಲ್ಲೂಕು ಪಂಚಾಯಿತಿಗೆ ಹಂಚಿಕೆ ಮಾಡಿರುವ ಅನುದಾನದಲ್ಲಿ ಭರಿಸಲು ಸರ್ಕಾರದ ಅನುಮತಿಯನ್ನು ಕೋರಿರುತ್ತಾರೆ.

ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಕುಂದಾಪುರ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

### ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 44 ಕೆಎಸ್‌ಎಸ್ 2015 ಬೆಂಗಳೂರು
### ದಿನಾಂಕ 30.05.2015

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕುಂದಾಪುರ ತಾಲ್ಲೂಕು ಪಂಚಾಯ್ತುತ್ ಅಧ್ಯಕ್ಷರ ಉಪಯೋಗಕ್ಕಾಗಿ ಹೊಸ ವಾಹನವನ್ನು 2015-16ನೇ ಸಾಲಿನಲ್ಲಿ ಲಭ್ಯವಿರುವ ಅನುದಾನದಲ್ಲಿ ವೆಚ್ಚವನ್ನು ಭರಿಸಿ ಖರೀದಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿದೆ.

1. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 111 ಶಿವಾನೀ 2011 ದಿನಾಂಕ 9.05.2013 ರಲ್ಲಿ ನಿಗದಿಪಡಿಸಿರುವ ರೂ. 6.50 ಲಕ್ಷಗಳ (ಆರು ಲಕ್ಷದ ಐವತ್ತು ಸಾವಿರ ರೂ.ಗಳು ಮಾತ್ರ) (ತೆರಿಗೆ ಹೊರತುಪಡಿಸಿ) ಮಿತಿಯೊಳಗೆ ಖರೀದಿಸುವುದು.
2. ಹಳೆಯ ವಾಹನವನ್ನು ನಿಯಮಾನುಸಾರ ವಿಲೇವಾರಿ ಮಾಡಿ ಅದರಿಂದ ಬರುವ ಮೌಲ್ಯವನ್ನು ಸರ್ಕಾರಿ ಲೆಕ್ಕ ಶೀರ್ಷಿಕೆಗೆ ಜಮಾ ಮಾಡುವುದು.

. . . 2 . .

3. ಸದರಿ ಹೊಸ ವಾಹನ ಖರೀದಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ ಹಾಗೂ ಅದರಡಿ ರಚಿಸಿರುವ ನಿಯಮಗಳನ್ನು ಪಾಲಿಸತಕ್ಕದ್ದು.
4. ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 197 ವೆಚ್ಚ-6/2015 ದಿನಾಂಕ 15.05.2015 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ.ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಕುಂದಾಪುರ
3. ಖಜಾನಾಧಿಕಾರಿ, ಜಿಲ್ಲಾ ಖಜಾನೆ, ಕುಂದಾಪುರ
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು
5. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು
6. ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
7. ನಗದು ಶಾಖೆ (ಸೇವೆಗಳು-ಸಿ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
8. ಮೇಲ್ವಿಚಾರಕರು, ಗಣಕ ಕೋಶ, ಗ್ರಾಅ ಮತ್ತು ಪಂ.ರಾಜ್ ಇಲಾಖೆ.
9. ಮಾಹಿತಿ ಕೇಂದ್ರ/ ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.